ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ರಾಜ್ಯದ ಗಣಿ ಉದ್ಯಮದಲ್ಲಿ ನಿರತರಾಗಿರುವ ಕಾರ್ಮಿಕರ ಹಿತಾಸಕ್ತಿಯ ಬಗ್ಗೆ

ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :-

232 (247) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಗಣಿ ಉದ್ಯಮಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರ ಹಿತದೃಷ್ಠಿಯನ್ನು ಗಮನದಲ್ಲಿಟ್ಟುಕೊಂಡು ಅವರುಗಳು ಕೆಲಸವನ್ನು ನಿರ್ವಹಿಸುವ ಸ್ಥಳಗಳಲ್ಲಿ ಕೈಗೊಂಡಿರುವ ಸುರಕ್ಷಾ ಕ್ರಮಗಳೇನು; ಈ ಸುರಕ್ಷಾ ಕ್ರಮಗಳು ರಾಷ್ಟ್ರೀಯ ಸುರಕ್ಷಾ ನಿಯಮಗಳಿಗೆ ಅನುಸಾರವಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಆ) ಗಣಿಗಾರಿಕೆಯಲ್ಲಿ ಉಪಯೋಗಿಸುತ್ತಿರುವ ಯಂತ್ರೋಪಕರಣಗಳು ಹಳೆಯದಾಗಿದ್ದು, ಹೊಸ ತಂತ್ರಜ್ಞಾನ, ತಂತ್ರಾಂಶಗಳನ್ನು ಬಳಸಿ ಹೊಸ ಯಂತ್ರೋಪಕರಣಗಳನ್ನು ಅಳವಡಿಸಲು ಸರ್ಕಾರದ ಕ್ರಮಗಳೇನು ? (ಈ ಬಗ್ಗೆ ಸಂಪೂರ್ಣ ವಿವರ ನೀಡುವುದು)